ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2363 |
| ಉತ್ತರಿಸುವ ಸಚಿವರು | : | ಮಾನ್ಯ ಕೈಮಗ್ಗ ಮತ್ತು ಜವಳಿ, ಸಕ್ಕರೆ ಹಾಗೂ ಕಬ್ಬು ಅಭಿವೃದ್ಧಿ ಸಚಿವರು. |
| ಉತ್ತರಿಸಬೇಕಾದ ದಿನಾಂಕ | : | 22-03-2022 |

| ಕ್ರ.ಸಂ | ಪ್ರಶ್ನೆ | ಮಾಹಿತಿ |
|---|---|---|
| ಅ) | ರಾಜ್ಯದಲ್ಲಿ ಎಷ್ಟು ಜವಳಿ ಪಾರ್ಕ್‌ಗಳನ್ನು ಸ್ಥಾಪಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು) | ರಾಜ್ಯದಲ್ಲಿ ಒಟ್ಟು 05 ಜವಳಿ ಪಾರ್ಕ್‌ಗಳನ್ನು ಸ್ಥಾಪಿಸಲಾಗಿದ್ದು, ಜಿಲ್ಲಾವಾರು ವಿವರಗಳು ಈ ಕೆಳಕಂಡಂತಿವೆ:-<br>1. ಬೆಂಗಳೂರು ಗ್ರಾಮಾಂತರ– ದೊಡ್ಡಬಳ್ಳಾಪುರ ಇಂಟಿಗ್ರೇಟೆಡ್ ಟೆಕ್ಸ್‌ಟೈಲ್ ಪಾರ್ಕ್.<br>2. ಚಿತ್ರದುರ್ಗ – ಬೈನರಿ ಅಪೆರೆಲ್ ಪಾರ್ಕ್ ಪ್ರೈ. ಲಿ.,<br>3. ದಾವಣಗೆರೆ – ದಾವಣಗೆರೆ ಟೆಕ್ಸ್‌ಟೈಲ್ ಪಾರ್ಕ್<br>4. ಬೆಳಗಾವಿ – ಬೋರಗಾಂವ್ ಟೆಕ್ಸ್‌ಟೈಲ್ ಪಾರ್ಕ್<br>5. ಬಳ್ಳಾರಿ – ಬಳ್ಳಾರಿ ಟೆಕ್ಸ್‌ಟೈಲ್ ಪಾರ್ಕ್ |
| ಆ) | ಕಲ್ಯಾಣ ಕರ್ನಾಟಕದ ಕಲಬುರಗಿಯಲ್ಲಿ ಜವಳಿ ಪಾರ್ಕ್ ಆರಂಭಿಸುವ ಕುರಿತು ಸರ್ಕಾರದ ಹಂತದಲ್ಲಿ ಪ್ರಸ್ತಾವನೆ ಇದೆಯೇ; ಇದ್ದಲ್ಲಿ, ಇದಕ್ಕೆ ಎಷ್ಟು ಅನುದಾನ ಒದಗಿಸಲಾಗಿದೆ; ಜವಳಿ ಪಾರ್ಕ್ ಆರಂಭಿಸಲು ಭೂಸ್ವಾಧೀನ ಪ್ರಕ್ರಿಯೆ ಆರಂಭಿಸಲಾಗುವುದೇ: (ಮಾಹಿತಿ ನೀಡುವುದು) | ಸರ್ಕಾರದ ಮುಂದಿದೆ.<br>Prime Minister Mega Integrated Textile Region and Apparel (PM-MITRA) ಪಾರ್ಕ್ ಯೋಜನೆಯಡಿ ಕಲಬುರಗಿಯಲ್ಲಿ ಅಂತರ ರಾಷ್ಟ್ರೀಯ ಮಟ್ಟದ ಜವಳಿ ಮತ್ತು ಉಡುಪು ಪಾರ್ಕ್‌ಅನ್ನು ಸ್ಥಾಪಿಸಲು ತಾತ್ವಿಕ ಅನುಮೋದನೆ ಕೋರಿ ಕೇಂದ್ರ ಸರ್ಕಾರಕ್ಕೆ ಪ್ರಾಥಮಿಕ ಯೋಜನಾ ವರದಿಯನ್ನು ಸಲ್ಲಿಸಲಾಗಿದ್ದು, ಪ್ರಸ್ತುತ ಇಂಧನ ಇಲಾಖೆಯಲ್ಲಿರುವ ಜಮೀನನ್ನು ಜವಳಿ ಪಾರ್ಕ್ ಸ್ಥಾಪಿಸಲು ಗುರುತಿಸಲಾಗಿರುತ್ತದೆ. |
| ಇ) | ಸದರಿ ಜವಳಿ ಪಾರ್ಕ್‌ನಿಂದ ಸ್ಥಳೀಯವಾಗಿ ಸೃಷ್ಟಿಯಾಗಬಹುದಾದ ಉದ್ಯೋಗಗಳ ಸಂಖ್ಯೆ ಎಷ್ಟು; ಸದರಿ ಉದ್ಯೋಗಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದ 371 ಜೆ ಅಡಿಯಲ್ಲಿ ಮೀಸಲಾತಿ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಯಾವ ಹಂತದ ಅಧಿಕಾರಿ/ ನೌಕರರಿಗೆ ಮೀಸಲಾತಿ ಎಷ್ಟು ಪ್ರಮಾಣದಲ್ಲಿ ನೀಡಲಾಗುವುದು; (ಸಂಪೂರ್ಣ ವಿವರ ನೀಡುವುದು) | ಉದ್ಭವಿಸುವುದಿಲ್ಲ. |
| ಈ) | ಸದರಿ ಜವಳಿ ಪಾರ್ಕ್ ಉದ್ಯಮಕ್ಕೆ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ವಿಶೇಷ ಅನುದಾನ ಘೋಷಣೆ ಮಾಡಲಾಗಿದೆಯೇ; ಹಾಗಿದ್ದಲ್ಲಿ, ಘೋಷಣೆ ಮಾಡಲಾದ ಅನುದಾನ ಎಷ್ಟು; (ಸಂಪೂರ್ಣ ವಿವರ ನೀಡುವುದು) | ಉದ್ಭವಿಸುವುದಿಲ್ಲ. |

ಸಂ: CI 125 JAKE 2022

(ಶಂಕರ ಬ ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಸಕ್ಕರೆ ಹಾಗೂ ಕಬ್ಬು ಅಭಿವೃದ್ಧಿ ಸಚಿವರು